# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 155 (256)
ಸದಸ್ಯರ ಹೆಸರು : ಶ್ರೀ ಮಂಜುನಾಥ್ ಭಂಡಾರಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 10.12.2024
ಉತ್ತರಿಸುವ ಸಚಿವರು : ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ ರಾಜ್ಯದ ಎಲ್ಲಾ ನಗರ ಮತ್ತು ಗ್ರಾಮಾಂತರ ಪ್ರದೇಶಗಳಿಗೆ ಮಹಾಯೋಜನೆಯನ್ನು ತಯಾರಿಸಲಾಗಿದೆಯೇ; ತಯಾರಿಸದಿದ್ದಲ್ಲಿ ಕಾರಣಗಳೇನು; ಯಾವಾಗ ಮಹಾಯೋಜನೆಯನ್ನು ತಯಾರಿಸಲಾಗುವುದು; | ರಾಜ್ಯದಲ್ಲಿನ ಒಟ್ಟು 289 ಸ್ಥಳೀಯ ಸಂಸ್ಥೆಗಳ ಪೈಕಿ 153 ಸ್ಥಳೀಯ ಸಂಸ್ಥೆಗಳಿಗೆ ಸ್ಥಳೀಯ ಯೋಜನಾ ಪ್ರದೇಶ ಘೋಷಣೆಯಾಗಿರುತ್ತದೆ (ಬಿ.ಡಿ.ಎ ಮತ್ತು ಬಿ.ಎಂ.ಆರ್.ಡಿ.ಎ ಹೊರತುಪಡಿಸಿ).<br><br>ಸ್ಥಳೀಯ ಯೋಜನಾ ಪ್ರದೇಶ ಘೋಷಣೆಯಾದ 153 ರ ಪೈಕಿ 100 ಸ್ಥಳೀಯ ಯೋಜನಾ ಪ್ರದೇಶಗಳ ಮಹಾಯೋಜನೆ ನಕ್ಷೆಗಳಿಗೆ ಸರ್ಕಾರದಿಂದ ಅಂತಿಮ ನಕ್ಷೆ ಅನುಮೋದನೆಯಾಗಿರುತ್ತದೆ ಹಾಗೂ 13 ಮಹಾಯೋಜನೆ ನಕ್ಷೆಗಳಿಗೆ ಸರ್ಕಾರದಿಂದ ತಾತ್ಕಾಲಿಕ ಅನುಮೋದನೆಯಾಗಿರುತ್ತದೆ. ಉಳಿದ 40 ಸ್ಥಳೀಯ ಯೋಜನಾ ಪ್ರದೇಶಗಳ ಮಹಾಯೋಜನೆ ತಯಾರಿಕೆ ಕಾರ್ಯ ಪ್ರಗತಿಯಲ್ಲಿರುತ್ತದೆ. |
| (ಆ) | ಸರಕಾರದ ಆದೇಶದ ಹಿನ್ನಲೆಯಲ್ಲಿ ಗ್ರಾಮಾಂತರ ಪ್ರದೇಶದಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯು ಏಕ ಮತ್ತು ಬಹು ನಿವೇಶನ ಬಡಾವಣೆ ನಕ್ಷೆ ವಿನ್ಯಾಸ ಅನುಮೋದನೆ ಮಾಡುತ್ತಿದ್ದು ಮಹಾಯೋಜನೆಯ ಅನುಪಸ್ಥಿತಿಯಲ್ಲಿ ಯಾವ ನಿಯಮಗಳು ಅನ್ವಯಿಸುತ್ತಿದೆ; ಇದಕ್ಕೆ ನಿಯಮಗಳಲ್ಲಿ ಅವಕಾಶವಿದೆಯೇ; | ಸ್ಥಳೀಯ ಯೋಜನಾ ಪ್ರದೇಶ ಘೋಷಣೆಯಾಗದ ಹೊರ ಭಾಗದ ಪ್ರದೇಶಗಳಿಗೆ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯು ವಿನ್ಯಾಸ ಅನುಮೋದನೆ ಕುರಿತಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪತ್ರ ಸಂಖ್ಯೆ:ಗ್ರಾಅಪ 86 ಗ್ರಾಪಂಅ 2014, ದಿನಾಂಕ: 11-11-2024 ರ ಕೈಪಿಡಿಯಂತೆ ಸದ್ಯ ಕ್ರಮವಹಿಸಲಾಗುತ್ತಿದ್ದು, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4-ಕೆ ರನ್ವಯ ಕರಡು ನಿಯಮಾವಳಿಗಳನ್ನು ಸಿದ್ಧಪಡಿಸಲಾಗಿದ್ದು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ, ಕಾನೂನು ಇಲಾಖೆ, ಆರ್ಥಿಕ ಇಲಾಖೆಯ ಅಭಿಪ್ರಾಯ ಪಡೆದು ಹೊರಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| (ಇ) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಗ್ರಾಮ ಠಾಣಾ ಕಲ್ಪನೆಯಿಲ್ಲದೆ ಭೌಗೋಳಿಕವಾಗಿ ಮನೆಗಳು ಹರಡಿಕೊಂಡಿದ್ದು ಹಾಗೂ ಕೃಷಿ ಜಾಗದ ನಡುವೆ ಇದ್ದು ಈ ಮನೆಗಳಿಗೆ ಏಕ ಮತ್ತು ಬಹು ನಿವೇಶನ ಬಡಾವಣೆ ನಕ್ಷೆ ವಿನ್ಯಾಸ ಅನುಮೋದನೆ ಮಾಡುವ ಬಗ್ಗೆ ಇರುವ ಸಮಸ್ಯೆಗಳ ಕುರಿತು ಯಾವ ರೀತಿ ಕ್ರಮವಹಿಸಲಾಗುತ್ತಿದೆ; | ಕರಾವಳಿ ಭಾಗದಲ್ಲಿನ ಗ್ರಾಮ ಪಂಚಾಯಿತಿ ವ್ಯಾಪ್ತಿಯಿಂದ ಜಿಲ್ಲಾ ಕೇಂದ್ರದವರೆಗೆ ಸಾರ್ವಜನಿಕರು ಸಂಪರ್ಕ ಹೊಂದುವ ಸಮಸ್ಯೆಗಳನ್ನು ನಿವಾರಿಸಲು ಜಿಲ್ಲೆಯಲ್ಲಿ ವಿವಿಧ ಯೋಜನಾ ಪ್ರಾಧಿಕಾರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿಕಾರಿಗಳಿಗೆ ಅಧಿಕಾರ ಪ್ರತ್ಯಾಯೋಜಿಸುವ ಸಂಬಂಧ, ಸರ್ಕಾರವು ಕರ್ನಾಟಕ ನಗರ ಮತ್ತು |

| | | |
|---|---|---|
| | | ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4-K ಹಾಗೂ 76K ರಡಿ ಪ್ರದತ್ತವಾದ ಅಧಿಕಾರದನ್ವಯ, ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಗೆ ಒಳಪಡದೇ ಇರುವ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಒಂದು (01) ಎಕರೆ ಒಳಗಿನ ಜಮೀನುಗಳಿಗೆ ಅನುಮೋದನೆ ನೀಡುವ ಪ್ರಕರಣಗಳಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 292 ಮೈಅಪ್ರಾ 2024, ದಿನಾಂಕ: 07-08-2024 ರಂತೆ, ತಾಂತ್ರಿಕ ಅನುಮೋದನೆ ನೀಡಲು ಅಧಿಕಾರ ಪ್ರತ್ಯಾಯೋಜಿಸಿ ಆದೇಶಿಸಲಾಗಿದೆ.<br><br>ಮುಂದುವರೆದು, ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 149 ಮೈಅಪ್ರಾ 2019, ದಿನಾಂಕ: 11.01.2023 ರಲ್ಲಿ ಉಡುಪಿ-ಮಲ್ಪೆ ಸ್ಥಳಿಯ ಯೋಜನಾ ಪ್ರದೇಶದ ಮಹಾಯೋಜನೆ (ಪ್ರ-1)ರ ವಲಯ ನಿಯಮವಳಿಗಳಲ್ಲಿ ಕಟ್ಟಡದ ಗರಿಷ್ಟ ಮಿತಿ 280 sq.mt ಮತ್ತು 35% ಕವರೇಜ್ ಮಿತಿಯನ್ನು ಹೊರತುಪಡಿಸಿ ತಿದ್ದುಪಡಿ ತರಲಾಗಿರುತ್ತದೆ. |
| (ಈ) | ಗ್ರಾಮಾಂತರ ಪ್ರದೇಶದಲ್ಲಿ ಏಕ ಮತ್ತು ಬಹು ನಿವೇಶನ ಬಡಾವಣೆ ನಕ್ಷೆ ವಿನ್ಯಾಸ ಅನುಮೋದನೆ ಕುರಿತಂತೆ ಸಮಗ್ರ ನಿಯಮಾವಳಿಗಳನ್ನು ಯಾವಾಗ ರೂಪಿಸಲಾಗುವುದು? | ಸ್ಥಳೀಯ ಯೋಜನಾ ಪ್ರದೇಶದ ಹೊರಗೆ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ವಿನ್ಯಾಸ ಅನುಮೋದನೆ ಕುರಿತಂತೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4-K ರನ್ವಯ ಕರಡು ನಿಯಮಾವಳಿಗಳನ್ನು ರಚಿಸಲಾಗಿದ್ದು, ಸದರಿ ಕರಡು ನಿಯಮಾವಳಿಗಳಿಗೆ ಕಾನೂನು ಇಲಾಖೆ ಮತ್ತು ಆರ್ಥಿಕ ಇಲಾಖೆಯ ಅಭಿಪ್ರಾಯ ಪಡೆದು ನಂತರ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆಯು ಪರಿಶೋಧಿಸಲ್ಪಟ್ಟ ನಂತರ ನಿಯಮಾನುಸಾರ ಕರಡು ನಿಯಮಾವಳಿಗಳನ್ನು ಹೊರಡಿಸಲು ಕ್ರಮವಹಿಸಲಾಗುವುದು. |

ಕಡತ ಸಂಖ್ಯೆ: ನಅಇ 463 ಮೈಅಪ್ರಾ 2024

(ಬಿ.ಎಸ್.ಸುರೇಶ)
ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು.